ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ತೋಟಗಾರಿಕೆ ಇಲಾಖೆ ವತಿಯಿಂದ ರೈತರಿಗೆ ರೂಪಿಸಿರುವ ಯೋಜನೆಗಳ ಕುರಿತು

ಶ್ರೀ ಹೆಚ್. ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):-

083 (577) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ತೋಟಗಾರಿಕೆ ಇಲಾಖೆ ವತಿಯಿಂದ ರೈತರಿಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ಪೂರ್ಣ ಮಾಹಿತಿಯನ್ನು ನೀಡುವುದು)

(ಆ) ಈ ಯೋಜನೆಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಈ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ರೈತರಿಗೆ ಅನುಕೂಲ ಕಲ್ಪಿಸಲಾಗಿದೆಯೇ ; (ವಿವರ ನೀಡುವುದು)

(ಈ) ಕಳೆದ 3 ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನವು ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವರ್ಷವಾರು ವಿವರ ನೀಡುವುದು)